## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ರವರಿಗೆ 14 ಮೆ.ವ್ಯಾ ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸಲು ನಿರಾಕ್ಷೇಪಣೆಯನ್ನು ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಪತ್ರ ಸಂಖ್ಯೆ : ಡಿಇ 79 ಎನ್‌ಸಿಇ 99, ದಿನಾಂಕ : 29.08.2000
2. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಆದೇಶ ಸಂಖ್ಯೆ : ಸಿಐ 128 ಎಸ್‌ಪಿಐ 2015, ದಿನಾಂಕ : 04.05.2015.
3. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಕಡತ ಸಂಖ್ಯೆ B-74.

* * *

**ಪ್ರಸ್ತಾವನೆ: -**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ಪತ್ರದಲ್ಲಿ ಮೆ: ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ಇವರಿಗೆ ವಿಜಯಪುರ ಜಿಲ್ಲೆಯ, ಇಂಡಿ ತಾಲ್ಲೂಕಿನ, ಮರಗೂರು ಗ್ರಾಮದಲ್ಲಿ 11 ಮೆ.ವ್ಯಾ ಸಾಮರ್ಥ್ಯದ ಸಹ ವಿದ್ಯುತ್ ಘಟಕವನ್ನು ಸ್ಥಾಪಿಸಲು ಕೆಲವೊಂದು ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯು ಮೆ: ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ರವರಿಗೆ ವಿಜಯಪುರ ಜಿಲ್ಲೆಯ, ಇಂಡಿ ತಾಲ್ಲೂಕಿನ, ಮರಗೂರು ಗ್ರಾಮದ ವ್ಯಾಪ್ತಿಯಲ್ಲಿ 3500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯ ಜೊತೆಗೆ 14 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು, ಮೆ: ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ಇವರಿಗೆ ವಿಜಯಪುರ ಜಿಲ್ಲೆಯ, ಇಂಡಿ ತಾಲ್ಲೂಕಿನ ಮರಗೂರು ಗ್ರಾಮದಲ್ಲಿ 11 ಮೆ.ವ್ಯಾ ಸಾಮರ್ಥ್ಯದ ಸಹ ವಿದ್ಯುತ್ ಘಟಕವನ್ನು ಸ್ಥಾಪಿಸಲು ಕೆಲವೊಂದು ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿತ್ತು. ಕಂಪನಿಯು ಕೆಲವು ಆಡಳಿತಾತ್ಮಕ ಕಾರಣಗಳಿಂದಾಗಿ ಸದರಿ Bio-mass ವಿದ್ಯುತ್ ಘಟಕವನ್ನು ಅನುಷ್ಠಾನಗೊಳಿಸಿರುವುದಿಲ್ಲವೆಂದು ತಿಳಿಸಿ, ಪ್ರಸ್ತುತ, ಸದರಿ ಮರಗೂರು ಗ್ರಾಮದಲ್ಲಿ 3500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಕಾರ್ಖಾನೆಯನ್ನು ಸ್ಥಾಪಿಸಿ ಅದರ ಜೊತೆಗೆ 14 ಮೆ.ವ್ಯಾ. (gross) ಸಾಮರ್ಥ್ಯದ ಸಹ-ವಿದ್ಯುತ್ ಘಟಕವನ್ನು ಸ್ಥಾಪಿಸಲು ಇದರಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಸ್ವಂತಕ್ಕೆ ಬಳಸಿಕೊಂಡು, 09 ಮೆ.ವ್ಯಾ ಸಾಮರ್ಥ್ಯದ ವಿದ್ಯುತ್‌ನ್ನು ಋತುವಿನ ಕಾಲದಲ್ಲಿ ಮತ್ತು 12 ಮೆ.ವ್ಯಾ ಸಾಮರ್ಥ್ಯದ ವಿದ್ಯುತ್‌ನ್ನು ಋತುವಲ್ಲದ ಕಾಲದಲ್ಲಿ ವಿದ್ಯುತ್ ಜಾಲಕ್ಕೆ ಜೋಡಿಸಲು ಉದ್ದೇಶಿಸಿದ್ದು, ಸದರಿ ಸಹ-ವಿದ್ಯುತ್ ಘಟಕವನ್ನು ಸ್ಥಾಪಿಸಲು ಅನುಮತಿ ನೀಡುವಂತೆ, ತಾಂತ್ರಿಕ ವಿವರಗಳೊಂದಿಗೆ ಕಂಪನಿಯವರು ಸಲ್ಲಿಸಿರುವ ಪ್ರಸ್ತಾವನೆಗೆ ನಿರಾಕ್ಷೇಪಣಾ ಪತ್ರ ನೀಡಬಹುದೆಂಬ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ **ಏಕ ಕಡತ ಪದ್ಧತಿಯಡಿ** ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರದ ಆದೇಶ ಸಂಖ್ಯೆ: ಇಎನ್ 192 ಎನ್‌ಸಿಇ 2015, ಬೆಂಗಳೂರು, ದಿನಾಂಕ: 01.09.2015.**

ಮೆ: ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ಇವರಿಗೆ ವಿಜಯಪುರ ಜಿಲ್ಲೆಯ, ಇಂಡಿ ತಾಲ್ಲೂಕಿನ ಮರಗೂರು ಗ್ರಾಮದಲ್ಲಿ ಸರ್ಕಾರದ ಪತ್ರ ಸಂಖ್ಯೆ: ಡಿಇ 79 ಎನ್‌ಸಿಇ 99, ದಿನಾಂಕ: 29.08.2000 ರಲ್ಲಿ 11 ಮೆ.ವ್ಯಾ ಸಾಮರ್ಥ್ಯದ Bio-mass ವಿದ್ಯುತ್ ಘಟಕ ಸ್ಥಾಪಿಸಲು ನೀಡಿದ್ದ ಅನುಮತಿಯನ್ನು ಈ ಮೂಲಕ ರದ್ದುಪಡಿಸಲಾಗಿದೆ. ಅದೇ ರೀತಿ ಸದರಿ ಮೆ: ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ಇವರಿಗೆ ಇದೇ ವಿಜಯಪುರ ಜಿಲ್ಲೆಯ, ಇಂಡಿ ತಾಲ್ಲೂಕಿನ ಮರಗೂರು ಗ್ರಾಮದಲ್ಲಿ ಮಂಜೂರಾಗಿರುವ 3500 ಟಿಸಿಡಿ ಸಕ್ಕರೆ ಕಾರ್ಖಾನೆಯಲ್ಲಿ 14 ಮೆ.ವ್ಯಾ ಸಾಮರ್ಥ್ಯದ ಸಹ ವಿದ್ಯುತ್ ಘಟಕ ಸ್ಥಾಪಿಸಲು ಹಾಗೂ ಈ ಘಟಕದಿಂದ ಉತ್ಪಾದಿಸುವ ವಿದ್ಯುತ್ತನ್ನು ಸ್ವಂತಕ್ಕೆ ಬಳಸಿಕೊಳ್ಳಲು ಹಾಗೂ 09 ಮೆ.ವ್ಯಾ. ಸಾಮರ್ಥ್ಯದ ವಿದ್ಯುತ್‌ನ್ನು ಋತುವಿನ ಕಾಲದಲ್ಲಿ ಮತ್ತು 12 ಮೆ.ವ್ಯಾ. ಸಾಮರ್ಥ್ಯದ

....2

ವಿದ್ಯುತ್‌ನ್ನು ಋತುವಲ್ಲದ ಕಾಲದಲ್ಲಿ ವಿದ್ಯುತ್ ಜಾಲಕ್ಕೆ ಜೋಡಿಸಲು ಈ ಕೆಳಗಿನ ನಿಬಂಧನೆಗಳಿಗೊಳಪಟ್ಟು ಸರ್ಕಾರದ **'ನಿರಾಕ್ಷೇಪಣೆಯನ್ನು'** ನೀಡಲಾಗಿದೆ.

1. ಅಭಿವೃದ್ಧಿದಾರರು ಉತ್ಪಾದಿಸುವ ವಿದ್ಯುತ್‌ನ Evacuation ಗೆ ಸಂಬಂಧಿಸಿದಂತೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ಪ್ರತ್ಯೇಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು;
2. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ ಅಂದರೆ, ಅರಣ್ಯ/ಕಂದಾಯ ಇಲಾಖೆ ಹಾಗೂ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;
3. ಅಭಿವೃದ್ಧಿದಾರರು ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು Open Access ಮೂಲಕ ಮಾರಾಟ ಮಾಡಲು ಅನುಮತಿಸಿದೆ;
4. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ ಕೆ.ಆರ್.ಇ.ಡಿ.ಎಲ್.ಗೆ ಶುಲ್ಕ ಪಾವತಿಸತಕ್ಕದ್ದು;

ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎ.ಎ.ಚಪ್ಪರಬಂದ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎-22034674.

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
4 ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ, ವಿಜಯಪುರ.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6 ಉಪ ಅರಣ್ಯ ಸಂರಕ್ಷಣಾಧಿಕಾರಿ ವಿಜಯಪುರ ಜಿಲ್ಲೆ, ವಿಜಯಪುರ.
7 ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಭವನ, ಚರ್ಚ್‌ಸ್ಟ್ರೀಟ್ ರಸ್ತೆ, ಬೆಂಗಳೂರು-01.
8 ಮೆ: ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ, ಮರಗೂರು ಗ್ರಾಮ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
9 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.